RNU AIR DHARWAD

NOVEMBER 04, 2026

AKASHAVANI - DHARWAD

PRADESH SAMACHARA (KANNADA) 07.05 A.M.

<><><>

ಮುಖ್ಯಾಂಶಗಳು:

- **ರಾಜ್ಯ ಸರ್ಕಾರ ರೈತರ ಪಂಪ್ ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡುತ್ತಿದ್ದು, 22 ಸಾವಿರ ಕೋಟಿ ವೆಚ್ಚ ಮಾಡುತ್ತಿದೆ – ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.**

- **ಕಬ್ಬು ಬೆಳೆಗಾರರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಲಿದೆ, ರೈತರು ಸಕ್ಕರೆ ಕಾರ್ಖಾನೆಗಳ ಆರಂಭಕ್ಕೆ ಸಹಕರಿಸಬೇಕು – ಸಚಿವ ವಿಜಯಾನಂದ ಕಾಶಪ್ಪನವರ ಮನವಿ.**

- **ಚುನಾವಣೆಗಳಲ್ಲಿ ಸತತ ಜನರಿಂದ ತಿರಸ್ಕಾರಗೊಂಡವರಿಂದ ದೇಶದಲ್ಲಿ ಅಸ್ಥಿರತೆ ಮತ್ತು ಅರಾಜಕತೆ ಸೃಷ್ಟಿಗೆ ಯತ್ನ – ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್.**

- **ಬಂಗಾಳ ಕೊಲ್ಲಿಯಲ್ಲಿ ತೀವ್ರಗೊಂಡಿರುವ ಮುರಸು ಚಂಡಮಾರುತ: ರಾಜ್ಯದ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ.**

ವಾರ್ತೆಗಳ ವಿವರ...

<><><>

ರಾಜ್ಯ ಸರ್ಕಾರ ರೈತರ ಪಂಪ್ ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡುತ್ತಿದ್ದು, ಅದಕ್ಕಾಗಿ ವಾರ್ಷಿಕ 22 ಸಾವಿರ ಕೋಟಿ ಹಣ ನೀಡುತ್ತಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹೇಳಿದ್ದಾರೆ. ಚಿತ್ರದುರ್ಗ ಜಿಲ್ಲೆಯ ಹಿರಿಯೂರಿನ ಧರ್ಮಪುರದಲ್ಲಿ ನೂತನ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ, ಮಾತನಾಡಿದ ಅವರು, ಈ ವ ರ್ಷ ಬರ ಹಿನ್ನೆಲೆಯಲ್ಲಿ ಹೆಚ್ಚಿನ ವಿದ್ಯುತ್ ಬಳಸಿರುವ ಪರಿಣಾಮ 30 ಸಾವಿರ ಕೋಟಿ ಹಣ ವೆಚ್ಚ ಮಾಡಬೇಕಾಗಿದೆ. 200ಕ್ಕೂ ಹೆಚ್ಚು ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋ ಷಣೆ ಮಾಡಿದ್ದೇವೆ. ರೈತರ ಬದುಕನ್ನು ಹಸನಗೊಳಿಸುವ ಉದ್ದೇಶದಿಂದ ರಾಜ್ಯ ಸರ್ಕಾರದಿಂದ ಹಲವು ಕಾರ್ಯಕ್ರಮಗಳನ್ನು ಜಾರಿ ಮಾಡಲಾಗಿದೆ ಎಂದರು.

<><><>

ಗೊಲ್ಲ ಮತ್ತು ಕಾಡುಗೊಲ್ಲ ಸಮುದಾಯಕ್ಕೆ ಪರಿಶಿ ಷ್ಟ ಪಂಗಡದ (ಎಸ್ಟಿ) ಮೀಸಲಾತಿ ಕಲ್ಪಿಸುವಂತೆ ಈ ಹಿಂದೆ ನಮ್ಮ ಸರ್ಕಾರದ ಮೂಲಕ ಕೇಂದ್ರಕ್ಕೆ ಕಳುಹಿಸಿದ್ದ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರ ತಿರಸ್ಕರಿಸಿತ್ತು. ಇದು ನೋವಿನ ಸಂಗತಿ. ಮತ್ತೊಮ್ಮೆ ಸಚಿವ ಸಂಪುಟ ಸಭೆಯಲ್ಲಿ ಈ ವಿಚಾರ ಚರ್ಚಿಸಿ,

ಕಾನೂನು ತಜ್ಞರ ಸಲಹೆ ಪಡೆದು ಸೂಕ್ತ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ ಹೇಳಿದ್ದಾರೆ. ಹಿರಿಯೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು: ಕಳೆದ ಚುನಾವಣೆಯಲ್ಲಿ ಎಚ್.ಡಿ. ದೇವೇಗೌಡರು 'ಕಾಡುಗೊಲ್ಲರ ಎಸ್ಟಿ ಪ್ರಮಾಣಪತ್ರ ನನ್ನ ಜೇಬಿನಲ್ಲಿದೆ. ನಾನು ಮೀಸಲಾತಿ ಮಾಡಿಸುತ್ತೇನೆ' ಎಂದು ಭರವಸೆ ನೀಡಿದ್ದರು. ಆದರೆ ಕೊಟ್ಟ ಮಾತನ್ನು ಉಳಿಸಿಕೊಳ್ಳಲು ಅವರಿಂದ ಸಾಧ್ಯವಾಯಿತೇ? ನಾವು ಜನರಿಗೆ ನೀಡಿದ ಭರವಸೆಗಳನ್ನು ಹಂತ ಹಂತವಾಗಿ ಈಡೇರಿಸುತ್ತಿದ್ದೇವೆ ಎಂದರು.

<><><>

ಕಬ್ಬು ಬೆಳೆಗಾರರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಲಿದ್ದು, ರೈತರು ತಾಳ್ಮೆ ಕಳೆದುಕೊಳ್ಳದೆ ಸಕ್ಕರೆ ಕಾರ್ಖಾನೆಗಳ ಆರಂಭಕ್ಕೆ ಸಹಕರಿಸಬೇಕು ಎಂದು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ವಿಜಯಾನಂದ ಕಾಶಪ್ಪನವರ ಮನವಿ ಮಾಡಿದ್ದಾರೆ. ಬಾಗಲಕೋಟೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಬ್ಬು ಬೆಳೆಗಾರರ ಸಂಕ ್ಟ ನಿವಾರಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತ, ಪೊಲೀಸ್ ಇಲಾಖೆ ಹಾಗೂ ಸಕ್ಕರೆ ಕಾರ್ಖಾನೆಗಳ ಮಾಲೀಕರೊಂದಿಗೆ ಚರ್ಚೆ ನಡೆಸಲಾಗಿದೆ. ಕಾರ್ಖಾನೆ ಮಾಲೀಕರು ರೈತರ ಮನೆಗಳಿಗೆ ತೆರಳಿ ಅವರೊಂದಿಗೆ ನೇರವಾಗಿ ಮಾತುಕತೆ ನಡೆಸಿ, ಸಮಸ್ಯೆಗಳನ್ನು ಆಲಿಸುವಂತೆ ಸೂಚಿಸಲಾಗಿದೆ ಎಂದರು. ಜಿಲ್ಲೆಯಲ್ಲಿ ಸುಮಾರು 14 ಸಕ್ಕರೆ ಕಾರ್ಖಾನೆಗಳಿದ್ದು, ರೈತರು ಬೆಳೆದ ಕಬ್ಬು ಸಮಯಕ್ಕೆ ಸರಿಯಾಗಿ ಕಾರ್ಖಾನೆಗಳಿಗೆ ಸಾಗಣೆಯಾಗದಿದ್ದರೆ ಇಳುವರಿ, ಗುಣಮಟ್ಟ ಹಾಗೂ ತೂಕದಲ್ಲಿ ನ ್ಟ ಉಂಟಾಗಲಿದೆ. ಕಾರ್ಖಾನೆಗಳು ಆರಂಭವಾಗದಿದ್ದರೆ ರೈತರಿಗೆ ಕೋಟ್ಯಂತರ ರೂಪಾಯಿ ನ ್ಟವಾಗುವ ಸಾಧ್ಯತೆಯಿದೆ. ಹೀಗಾಗಿ ರೈತರು ಮತ್ತು ಕಾರ್ಖಾನೆಗಳ ನಡುವೆ ಸಹಕಾರದ ವಾತಾವರಣ ನಿರ್ಮಾಣವಾಗಬೇಕು ಎಂದು ಹೇಳಿದರು.

<><><>

ಕಬ್ಬು ಬೆಳೆಗಾರರು ಹಾಗೂ ಸಕ್ಕರೆ ಕಾರ್ಖಾನೆ ಮಾಲೀಕರ ನಡುವಿನ ದರ ನಿಗದಿ ಗೊಂದಲಕ್ಕೆ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ರೈತರು ಹಾಗೂ ಸಕ್ಕರೆ ಕಾರ್ಖಾನೆಯವರ ಜೊತೆಗೆ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು: ರೈತರು ಹಾಗೂ ಕಾರ್ಖಾನೆಯ ಕಡೆಯ ಬೇಡಿಕೆಗಳಲ್ಲಿ ವ್ಯತ್ಯಾಸವಿದ್ದು, ಒಮ್ಮತ ಮೂಡಿಸಲು ಪ್ರಯತ್ನಿಸಲಾಗುತ್ತಿದೆ. ಅಗತ್ಯವಿದ್ದರೆ ಇಂದು ಮತ್ತೊಮ್ಮೆ ಕಾರ್ಖಾನೆ ಮಾಲೀಕರ ಸಭೆ ನಡೆಸಲಾಗುವುದು. ದರ ನಿಗದಿ ವಿಚಾರವಾಗಿ ಮುಖ್ಯಮಂತ್ರಿಗಳೊಂದಿಗೂ ಚರ್ಚಿಸಲಾಗುವುದು ಎಂದರು.

<><><>

ಕಬ್ಬಿಗೆ ಸೂಕ್ತ ಹಾಗೂ ವೈಜ್ಞಾನಿಕ ಬೆಂಬಲ ಬೆಲೆ ನಿಗದಿಪಡಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘಟನೆಗಳ ಸಮನ್ವಯ ಸಮಿತಿಯ ಆಶ್ರಯದಲ್ಲಿ ಮೈಸೂರಿನಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಮೆರವಣಿಗೆಯಲ್ಲಿದ್ದ ರೈತರು ಕೈಯಲ್ಲಿ ಕಬ್ಬಿನ ಜಲ್ಲೆಗಳನ್ನು ಹಿಡಿದು, ತಮಟೆ ಬಾರಿಸುತ್ತಾ ರಾಜ್ಯ ಸರ್ಕಾರದ ವಿರುದ್ಧ ಘೋ 'ಣೆಗಳನ್ನು ಕೂಗಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಬೆಳೆದ ಬೆಳೆಗೆ ಸೂಕ್ತ ಬೆಲೆ ಸಿಗದೆ ನ ್ಟ ಅನುಭವಿಸುತ್ತಿರುವ ಕಬ್ಬು ಬೆಳೆಗಾರರ ರಕ್ಷಣೆಗೆ ಸರ್ಕಾರ ತಕ್ಷಣವೇ ಮುಂದಾಗಬೇಕು ಮತ್ತು ವೈಜ್ಞಾನಿಕ ಬೆಲೆಯನ್ನು ಘೋಷಿಸಬೇಕು ಎಂದು ಪ್ರತಿಭಟನಾಕಾರರು ಈ ಸಂದರ್ಭದಲ್ಲಿ ಒತ್ತಾಯಿಸಿದರು. ಮೆರವಣಿಗೆಯ ಕೊನೆಯಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿದ ರೈತರು, ಕಚೇರಿಯ ಮುಂಭಾಗದ ರಸ್ತೆಯಲ್ಲಿ ಅಡ್ಡಲಾಗಿ ಕುಳಿತು ಧರಣಿ ನಡೆಸಿದರು. ಇದರಿಂದಾಗಿ ಕೆಲ ಕಾಲ ಸಂಚಾರ ವ್ಯತ್ಯಯ ಉಂಟಾಯಿತು.

<><><>

ಈಗ ಪ್ರಕಟಣೆ ಬಳಿಕ ಪ್ರದೇಶ ಸಮಾಚಾರ ಮುಂದುವರಿಯುವುದು

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

<><><>

ಜನಾದೇಶದ ಮೂಲಕ ಅಧಿಕಾರ ಪಡೆಯಲು ವಿಫಲರಾಗಿ ಚುನಾವಣೆಗಳಲ್ಲಿ ಸತತ ಜನರಿಂದ ತಿರಸ್ಕಾರಗೊಂಡವರು ದೇಶದಲ್ಲಿ ಅಸ್ಥಿರ ಮತ್ತು ಅರಾಜಕತೆ ಸೃಷ್ಟಿಸಲು ಯತ್ನಿಸುತ್ತಿದ್ದಾರೆ ಎಂದು ಕೇಂದ್ರ ಬಾಹ್ಯಾಕಾಶ ಮತ್ತು ತಂತ್ರಜ್ಞಾನ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜಾಪ್ರಭುತ್ವ ಉಳಿಸಿ–ಅರಾಜಕತೆ ಅಳಿಸಿ ಅಭಿಯಾನವನ್ನು ದೇಶಾದ್ಯಂತ ಹಮ್ಮಿಕೊಳ್ಳಲಾಗಿದ್ದು, ಕಾಂಗ್ರೆಸ್ ಪಕ್ಷ ಚುನಾವಣಾ ಆಯೋಗ ಸೇರಿದಂತೆ ಸಾಂವಿಧಾನಿಕ ಸಂಸ್ಥೆಗಳ ವಿರುದ್ಧ ಅಪಪ್ರಚಾರ ನಡೆಸಿ, ಅಸ್ಥಿರತೆ ಉಂಟು ಮಾಡಲು ಪ್ರಯತ್ನಿಸುತ್ತಿದೆ ಎಂದು ತಿಳಿಸಿದ್ದಾರೆ. ದೇಶದಾದ್ಯಂತ ಮತಗಳ್ಳತನ ನಡೆಯುತ್ತಿದೆ ಎನ್ನುವ ಕಾಂಗ್ರೆಸ್ ಆರೋಪ ನಿರಾಧಾರ. ಚುನಾವಣಾ ಆಯೋಗ ಮೇಲೆ ಅಪಪ್ರಚಾರ ನಡೆಸುವ ಮೂಲಕ ಸಾಂವಿಧಾನಿಕ ಸಂಸ್ಥೆಗಳ ಬಗ್ಗೆ ಜನರಲ್ಲಿರುವ ವಿಶ್ವಾಸವನ್ನು ಕುಗ್ಗಿಸುವ ಕೆಲಸ ಮಾಡುತ್ತಿದ್ದಾರೆ. ರಾಜ್ಯದಲ್ಲಿ ಇತ್ತೀಚೆಗೆ ನಡೆದ ವಿಧಾನ ಪರಿ ತ್ ಚುನಾವಣೆಯಲ್ಲಿ ಪರಾಭವಗೊಂಡಿದೆ ಎಂದು ತಿಳಿಸಿದರು.

<><><>

ಕಾಂಗ್ರೆಸ್ ಸರ್ಕಾರ ಅಭಿವೃದ್ಧಿ ಮಾಡದೆ ಎಲ್ಲ ಕಡೆ ಸೋಲುತ್ತಿದೆ. ಆದರೂ ಪ್ರಜಾಪ್ರಭುತ್ವವನ್ನು ಹರಣ ಮಾಡಲು ಇವಿಎಂ, ಎಸ್ಐಆರ್ ವಿರುದ್ಧ ಪ್ರತಿಭಟನೆ ನಡೆಸಲಾಗುತ್ತಿದೆ ಎಂದು ವಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಕೋಲಾರದಲ್ಲಿ ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ ಆಂದೋಲನದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇವಿಎಂನಿಂದ ಗೆದ್ದಾಗ ಸುಮ್ಮನಿದ್ದು, ಸೋತಾಗ ಇವಿಎಂ ಸರಿ ಇಲ್ಲ ಎಂದು ಹೇಳುವುದು ಕಾಂಗ್ರೆಸ್‌ನ ಚಾಳಿಯಾಗಿದೆ ಎಂದರು. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರೇ ವೋಟಿಂಗ್ ಯಂತ್ರದ ವ್ಯವಸ್ಥೆ ತಂದಿದ್ದರು. ರಾಜ್ಯದಲ್ಲಿ ಇಂದು ಚುನಾವಣೆ ನಡೆದರೂ ಕಾಂಗ್ರೆಸ್ ಸಂಪೂರ್ಣವಾಗಿ ಸೋಲುತ್ತದೆ. ಒಂದು ಬಾಂಡ್ಲಿ ಡಾಂಬರನ್ನು ರಸ್ತೆಗೆ ಹಾಕುವ ್ಟು ಹಣ ಉಳಿದಿಲ್ಲ. ಇದರಿಂದಾಗಿ ಕಾಂಗ್ರೆಸ್ ಸೋಲುತ್ತದೆಯೇ ಹೊರತು, ಇದಕ್ಕೂ ಇವಿಎಂಗೂ ಸಂಬಂಧವಿಲ್ಲ. ಆದ್ದರಿಂದ ಕಾಂಗ್ರೆಸ್ ಹೋರಾಟಕ್ಕೆ ವಿರುದ್ಧವಾಗಿ ನಾವು ಪ್ರಜಾಪ್ರಭುತ್ವ ಉಳಿಸಿ ಆಂದೋಲನ ಮಾಡುತ್ತಿದ್ದೇವೆ ಎಂದರು.

<><><>

ಬಂಗಾಳ ಕೊಲ್ಲಿಯಲ್ಲಿ ತೀವ್ರಗೊಂಡಿರುವ ಮುರಸು ಚಂಡಮಾರುತ ಆಂಧ್ರಪ್ರದೇಶದ ಕರಾವಳಿಯತ್ತ ಮುನ್ನುಗ್ಗುತ್ತಿದ್ದು, ಇದರ ಪರಿಣಾಮ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಕರಾವಳಿ ಹಾಗೂ ಒಳನಾಡಿನ ಜಿಲ್ಲೆಗಳಲ್ಲಿ ಗುಡುಗು, ಸಿಡಿಲು ಸಹಿತ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಇದೇ 5ರವರೆಗೆ ರಾಜ್ಯದ ವಿವಿಧೆಡೆ ಬಿರುಗಾಳಿ ಬೀಸುವ ಸಾಧ್ಯತೆಯಿದ್ದು, ಸಾರ್ವಜನಿಕರು ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ. ಬಂಗಾಳ ಕೊಲ್ಲಿಯಲ್ಲಿ ತೀವ್ರಗೊಂಡಿರುವ ಚಂಡಮಾರುತ ಆಂಧ್ರಪ್ರದೇಶದ ನೆಲ್ಲೂರು ಮತ್ತು ನರಸಾಪುರ ನಡುವಿನ ಕರಾವಳಿ ಪ್ರದೇಶವನ್ನು ಪ್ರವೇಶಿಸುವ ಸಾಧ್ಯತೆಯಿದೆ. ಈ ಸಂದರ್ಭದಲ್ಲಿ ಗಂಟೆಗೆ 100ರಿಂದ 110 ಕಿಲೋಮೀಟರ್ ವೇಗದಲ್ಲಿ ಗಾಳಿ ಬೀಸುವ ನಿರೀಕ್ಷೆಯಿದೆ. ಸಮುದ್ರದಲ್ಲಿ ಅಲೆಗಳ ಅಬ್ಬರವೂ ಹೆಚ್ಚಾಗುವ ಸಾಧ್ಯತೆಯಿದ್ದು, ಕರಾವಳಿ ಭಾಗಗಳಲ್ಲಿ ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.

<><><>

ಕೌಶಲ್ಯಕ್ಕೆ ಸಂಬಂಧಿಸಿದಂತೆ ಕೈಗಾರಿಕಾ ರಂಗದ ಬೇಡಿಕೆಗಳನ್ನು ಪೂರೈಸಲು ರಾಜ್ಯದ 33 ಸರಕಾರಿ ಜಿ.ಟಿ.ಟಿ.ಸಿ. ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರಿಸಿ 'ನ್ ಟಾಯ್ಲಿಂಗ್, ಸಿ ಎನ್ ಸಿ ಮತ್ತು ಮೆಕೆನ್ಟ್ರಾನಿಕ್ಸ್ ವಿಭಾಗಗಳಲ್ಲಿ ಸಂಪೂರ್ಣ ತರಬೇತಿ ಕೊಡಲಾಗುತ್ತಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಖಾತೆ ಸಚಿವ ಎಂ ಬಿ ಪಾಟೀಲ ಹೇಳಿದ್ದಾರೆ. **'ಬೆಂಗಳೂರು ಕೌಶಲ್ಯ ಶೃಂಗಸಭೆ–2026'ರಲ್ಲಿ ಭಾಗವಹಿಸಿ ಮತನಾಡಿದ ಅವರು:** ಸಮಗ್ರ ಕೈಗಾರಿಕಾ ಬೆಳವಣಿಗೆಯ ದೂರದೃಷ್ಟಿಯಿಂದ ಸಾಂಪ್ರದಾಯಿಕ ತಯಾರಿಕೆಯ ವಿಧಾನದಿಂದ ಬೌದ್ಧಿಕ ಆಸ್ತಿಗಳ ನಿರ್ಮಾಣ, ಡೀಪ್–ಟೆಕ್ ಸಂಶೋಧನೆ,

ಪ್ರಿಸಿ 'ನ್ ಎಂಜಿನಿಯರಿಂಗ್' ಮತ್ತು ಜಾಗತಿಕ ಮಟ್ಟದ ಸಂಶೋಧನೆ ಹಾಗೂ ಅಭಿವೃದ್ಧಿ ಪರಿಸರವ್ಯವಸ್ಥೆಯ ಕಡೆಗೆ ಹೊರಳಿಕೊಳ್ಳುತ್ತಿದ್ದೇವೆ ಎಂದು ಹೇಳಿದರು.

<><><>

ಯಾದಗಿರಿ ಜಿಲ್ಲೆಯಲ್ಲಿ ಉತ್ಪಾದನೆಯಾಗುವ ಉತ್ತಮ ಗುಣಮಟ್ಟದ ಹತ್ತಿಯನ್ನು ಜವಳಿ ಉತ್ಪನ್ನಗಳನ್ನಾಗಿ ಪರಿವರ್ತಿಸಿ ಅಂತಾರಾಷ್ಟ್ರೀಯ ಮಾರುಕಟ್ಟೆಗೆ ಪರಿಚಯಿಸುವ ನಿಟ್ಟಿನಲ್ಲಿ ಉದ್ಯಮಿಗಳು ಮುಂದಾಗಬೇಕು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಬಿ. ಸತೀಶಕುಮಾರ ಹೇಳಿದ್ದಾರೆ. ಯಾದಗಿರಿಯಲ್ಲಿ ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ ಆಯೋಜಿಸಿದ್ದ ರಫ್ತು ಪ್ರೋತ್ಸಾಹ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಲಭ್ಯವಿರುವ ಸ್ಥಳೀಯ ಉತ್ಪನ್ನಗಳನ್ನು ಗುಣಮಟ್ಟದೊಂದಿಗೆ ಹೆಚ್ಚಿನ ಪ್ರಮಾಣದಲ್ಲಿ ಉತ್ಪಾದಿಸಿ ವಿದೇಶಗಳಿಗೆ ರಫ್ತು ಮಾಡುವ ಮೂಲಕ ವಿದೇಶಿ ವಿನಿಮಯ ಗಳಿಕೆಗೆ ಅವಕಾಶವಿದೆ.

<><><>

ತಾವು ಪ್ರತಿನಿಧಿಸುತ್ತಿರುವ ಕೊರಟಗೆರೆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ತುಂಬಾಡಿ ಗ್ರಾಮ ಪಂಚಾಯಿತಿಯು ಮೂರು ಬಾರಿ 'ಗಾಂಧಿಗ್ರಾಮ ಪುರಸ್ಕಾರಕ್ಕೆ' ಭಾಜನವಾಗಿ, ಅಭಿವೃದ್ಧಿಯಲ್ಲಿ ತನ್ನದೇ ಆದ ಹೆಜ್ಜೆಗುರುತು ಮೂಡಿಸಿದೆ ಎಂದು ಉಪಮುಖ್ಯಮಂತ್ರಿ ಡಾಕ್ಟರ್ ಜಿ.ಪರಮೇಶ್ವರ ಹೇಳಿದ್ದಾರೆ.

<><><>

ಪಿಂಚಣಿ ಕಾರ್ಯಕ್ಷಮತೆ ಸೂಚ್ಯಂಕದಲ್ಲಿ ಉಡುಪಿಯ ಇಪಿಎಫ್ಒ ಪ್ರಾದೇಶಿಕ ಕಚೇರಿಯು ಅತ್ಯುತ್ತಮ ಕಚೇರಿಯಾಗಿ ಹೊರಹೊಮ್ಮಿದ್ದು ಭವಿ ್ಯ ನಿಧಿ–2026 ಪ್ರಶಸ್ತಿಗೆ ಭಾಜನವಾಗಿದೆ.

<><><>

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಕ್ರೀಡಾ ನಿರ್ದೇಶನಾಲಯದ ವತಿಯಿಂದ ನಾಳೆ ಮತ್ತು ನಾಡಿದ್ದು ಕಂಠೀರವ ಕ್ರೀಡಾಂಗಣದಲ್ಲಿ 2026–27ನೇ ಸಾಲಿನ 8ನೇ ವಾರ್ಷಿಕ ಅಂತರ ಕಾಲೇಜು ಅಥ್ಲೆಟಿಕ್ ಕ್ರೀಡಾಕೂಟವನ್ನು ಆಯೋಜಿಸಲಾಗಿದೆ. ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ. ರಮೇಶ್.ಬಿ. ಗುರುವಾರ ಬೆಳಿಗ್ಗೆ 11.30ಕ್ಕೆ ಕ್ರೀಡಾಕೂಟವನ್ನು ಉದ್ಘಾಟಿಸಲಿರುವರು. ಕುಲಸಚಿವರಾದ ಎ. ನವೀನ್ ಜೋಸೆಫ್, ಪ್ರೊ.ರಮೇಶ. ಬಿ.ಕುಡೇನಟ್ಟಿ, ವಿತ್ತಾಧಿಕಾರಿಗಳಾದ ಎಂ.ವಿ ವಿಜಯಲಕ್ಷ್ಮಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

<><><>

ಕೊನೆಯಲ್ಲಿ ಮತೊಮ್ಮೆ ಮುಖ್ಯಾಂಶಗಳು:

- ರಾಜ್ಯ ಸರ್ಕಾರ ರೈತರ ಪಂಪ್ ಸೆಟ್‌ಗಳಿಗೆ ಉಚಿತ ವಿದ್ಯುತ್ ನೀಡುತ್ತಿದ್ದು, 22 ಸಾವಿರ ಕೋಟಿ ವೆಚ್ಚ ಮಾಡುತ್ತಿದೆ – ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.

- ಕಬ್ಬು ಬೆಳೆಗಾರರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸಲಿದೆ, ರೈತರು ಸಕ್ಕರೆ ಕಾರ್ಖಾನೆಗಳ ಆರಂಭಕ್ಕೆ ಸಹಕರಿಸಬೇಕು – ಸಚಿವ ವಿಜಯಾನಂದ ಕಾಶಪ್ಪನವರ ಮನವಿ.

- ಚುನಾವಣೆಗಳಲ್ಲಿ ಸತತ ಜನರಿಂದ ತಿರಸ್ಕಾರಗೊಂಡವರಿಂದ ದೇಶದಲ್ಲಿ ಅಸ್ಥಿರತೆ ಮತ್ತು ಅರಾಜಕತೆ ಸೃಷ್ಟಿಗೆ ಯತ್ನ – ಕೇಂದ್ರ ಸಚಿವ ಡಾ. ಜಿತೇಂದ್ರ ಸಿಂಗ್.

- ಬಂಗಾಳ ಕೊಲ್ಲಿಯಲ್ಲಿ ತೀವ್ರಗೊಂಡಿರುವ ಮುರಸು ಚಂಡಮಾರುತ: ರಾಜ್ಯದ ಹಲವು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಸಾಧ್ಯತೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು. ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ

<><><><><><><>